ಸಾಕ್ಷಿಯನ್ನು ದಿಃ 02-08-2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಿ ಮುಂದುವರೆದ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರಃಶ್ರೀ ಎ.ಎ.ಎ. ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು, ಅದನ್ನು ಓದಿ ತಿಳಿದುಕೊಂಡು ನಂತರ ಅದಕ್ಕೆ ನಾನು ಸಹಿ ಹಾಕಿರುತ್ತೇನೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ-1 ಎಂದು, ಪ್ರಥಮ ವರ್ತಮಾನ ಹೇಳಿಕೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ-2, ಸ್ಥಳ ಮಹಜರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ-3, ವಾಹನ ತಡೆ ಪಂಚನಾಮೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ-4, ಗಾಯದ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ-5, ಬಿ ಎಕ್ಸ್ಟ್ರಾಕ್ಟ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ-6, ಅಂತಿಮ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ-7, ಸಿಸಿ ನಂ. 507/2024 ರ ಆದೇಶ ಪುಟದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ-8, ಮೋಟಾರು ವಾಹನ ತಪಾಸನಾ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ-9 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದರಿಂದ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಕಾರವಾರ.